ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೯**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಗುರುವಾರ, ದಿನಾಂಕ: ೦೧ನೇ ಡಿಸೆಂಬರ್, ೨೦೧೬**

---

**ಸಮೂಹ – IV**

೧. ಮುಖ್ಯಮಂತ್ರಿಗಳು.
೨. ಗೃಹ ಸಚಿವರು.
೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.
೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.
೫. ಅಬಕಾರಿ ಸಚಿವರು.

---

## ಉಕ್ಕಿನ ಮೇಲು ಸೇತುವೆಯ ನಿರ್ಮಾಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೨೧ (೧೧೪೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನ ಬಸವೇಶ್ವರ ವೃತ್ತದಿಂದ ಕೊಲಂಬಿಯಾ ಏಷ್ಯಾ ಆಸ್ಪತ್ರೆವರೆಗೆ ಉಕ್ಕಿನ ಮೇಲು ಸೇತುವೆಯನ್ನು ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಉಕ್ಕಿನ ಮೇಲು ಸೇತುವೆಯ ಯೋಜನೆಯ ಸಾಧಕ ಬಾಧಕಗಳ ಕುರಿತು ವಿವರವಾಗಿ ಅಭ್ಯಸಿಸಲಾಗಿದೆಯೇ ; ಇದ್ದಲ್ಲಿ, ವಿವರ ಒದಗಿಸುವುದು;

(ಇ) ಈ ಉಕ್ಕಿನ ಮೇಲು ಸೇತುವೆಯ ನಿರ್ಮಾಣಕ್ಕೆ ತಗಲುವ ಒಟ್ಟು ವೆಚ್ಚವೆಷ್ಟು ;

(ಈ) ಈ ವೆಚ್ಚದ ಅರ್ಧ ಭಾಗದಲ್ಲಿ ಕಾಂಕ್ರಿಟ್ ಮೇಲು ಸೇತುವೆಯನ್ನು ನಿರ್ಮಾಣ ಮಾಡಲು ಸಾಧ್ಯವೆಂದು ತಜ್ಞರು ಸರ್ಕಾರಕ್ಕೆ ವರದಿ ನೀಡಿರುತ್ತಾರೆಯೇ ;

(ಉ) ಹಾಗಿದ್ದಲ್ಲಿ, ಈ ಮೇಲು ಸೇತುವೆ ನಿರ್ಮಾಣದ ಬಗ್ಗೆ ಸರ್ಕಾರದ ಅಂತಿಮ ನಿರ್ಧಾರವೇನು ?

## ತೆಂಗು ಬೆಳೆಗಾರರಿಗೆ ನೀರಾ ಇಳಿಸಲು ಅನುಮತಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೨೨ (೧೨೫೫) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ತೆಂಗು ಬೆಳೆಗಾರರ ಹಿತದೃಷ್ಟಿಯಿಂದ ನೀರಾ ಇಳಿಸಲು ಸರ್ಕಾರ ಅನುಮತಿ ನೀಡಲು ಯೋಚಿಸಿದೆಯೇ ;

(ಆ) ಇತ್ತೀಚಿನ ದಿನಗಳಲ್ಲಿ ತೆಂಗು ಬೆಳೆಗೆ ಮಾರುಕಟ್ಟೆಯಲ್ಲಿ ಬೆಲೆ ಕುಸಿದ ಕಾರಣ, ನೀರಾ ವ್ಯವಸ್ಥೆ ಜಾರಿಗೆ ತರಲು ಯೋಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಉತ್ತಮ ನೀರಾ ಇಳಿಸಲು ರೈತರಿಗೆ ಅನುಕೂಲ ಮಾಡಿಕೊಡಲು ಯಾವ ಮಾನದಂಡ ಅನುಸರಿಸಲಾಗುವುದು ;

(ಈ) ಕೂಡಲೇ ಆದೇಶ ಮಾಡಿ ರೈತರಿಗೆ ಅನುಕೂಲ ಮಾಡಿಕೊಡಲಾಗುವುದೇ ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅರ್ಕಾವತಿ ಬಡಾವಣೆಗೆ ನಿವೇಶನಗಳ ಹಂಚಿಕೆ ಮತ್ತು ನೋಂದಣಿ ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೨೩ (೧೨೧೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅರ್ಕಾವತಿ ಬಡಾವಣೆ ಪ್ರಾರಂಭವಾಗಿದ್ದು ಯಾವಾಗ ; ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; ಯಾವಾಗ ಹಂಚಿಕೆ ಮಾಡಲಾಯಿತು ; (ವಿವರ ನೀಡುವುದು)

(ಆ) ನಿವೇಶನ ಹಂಚಿಕೆ ಮಾಡಿದವರಿಂದ ಎಷ್ಟು ಹಣ ಪಡೆಯಲಾಗಿದೆ ;

(ಇ) ನಿವೇಶನ ಹಂಚಿಕೆ ಮಾಡಿದವರಲ್ಲಿ ಎಷ್ಟು ಜನರಿಗೆ ನೋಂದಣಿ ಮಾಡಿಕೊಡಲಾಗಿದೆ ; ಇನ್ನೂ ನೋಂದಣಿ ಮಾಡಿಕೊಡದವರ ಸಂಖ್ಯೆ ಎಷ್ಟು ; ಈ ಪ್ರಕ್ರಿಯೆ ವಿಳಂಬವಾಗಲು ಕಾರಣವೇನು ?

## ಬಿ.ಬಿ.ಎಂ.ಪಿ. ವ್ಯಾಪ್ತಿಯ ಸರ್ಕಾರಿ ಜಮೀನು ಮತ್ತು ರಾಜ ಕಾಲುವೆ ಒತ್ತುವರಿ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೪ (೧೧೪೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸರ್ಕಾರಿ ಜಮೀನು ಮತ್ತು ರಾಜಕಾಲುವೆ ಒತ್ತುವರಿ ಮಾಡಿ ನಿರ್ಮಾಣ ಮಾಡಿರುವ ಕಟ್ಟಡಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಎಷ್ಟು ಕಟ್ಟಡಗಳಿಗೆ ಅಧಿಕಾರಿಗಳು ಪರವಾನಗಿ ನೀಡಿದ್ದಾರೆ ;

(ಇ) ಪರವಾನಗಿ ನೀಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಳ್ಳಲು ಉದ್ದೇಶಿಸಿದೆಯೇ ;

(ಈ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಿವೇಶನದಿಂದ ಬಂದ ಆದಾಯದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೫ (೯೯೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನಿರ್ಮಿಸಿದ ಬಡಾವಣೆಗಳಿಂದ, ನಿವೇಶನದಾರರಿಂದ ಪಡೆದ ಮೊತ್ತದಲ್ಲಿ ಹಂಚಿಕೆದಾರರನ್ನು ಹೊರತುಪಡಿಸಿ, ನಿವೇಶನ ಹಂಚಿಕೆಯಾಗದ ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಕಟ್ಟಿದ ಹಣದ ಒಟ್ಟು ಮೊತ್ತ ಎಷ್ಟು ;

(ಆ) ಹಾಗಿದ್ದಲ್ಲಿ, ಈ ಮೊತ್ತವನ್ನು ಯಾವ ಯಾವ ಬ್ಯಾಂಕ್‌ಗಳಲ್ಲಿ ಎಷ್ಟೆಷ್ಟು ಮೊತ್ತವನ್ನು ಠೇವಣಿ ಇಡಲಾಗಿದೆ ;

(ಇ) ಹಂಚಿಕೆ ಮಾಡದ ನಿವೇಶನಗಳ ಮೊತ್ತವನ್ನು ಅರ್ಜಿದಾರರಿಗೆ ಕೂಡಲೇ ಹಿಂದಿರುಗಿಸದೆ ಇರುವುದಕ್ಕೆ ಕಾರಣಗಳೇನು ;

(ಈ) ಎಷ್ಟು ವರ್ಷಗಳಿಂದ ಈ ಹಣ ಬಾಕಿ ಇದೆ ;

(ಉ) ಹೀಗೆ ಹೂಡಿಕೆ ಮಾಡಿದ ಹಣದ ಮೊತ್ತದಿಂದ ಬಡ್ಡಿ ರೂಪದಲ್ಲಿ ಬಿ.ಡಿ.ಎ.ಗೆ ಇದುವರೆಗೂ ಬಂದ ಒಟ್ಟು ಮೊತ್ತ ಎಷ್ಟು ; ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗಿದೆ ?

## ಮಹಾನಗರಗಳ ವ್ಯಾಪ್ತಿಯಲ್ಲಿ ಕಸ ವಿಲೇವಾರಿ, ಸ್ವಚ್ಛತೆ ಹಾಗೂ ಅಸಮರ್ಪಕ ನಿರ್ವಹಣೆಯ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೬ (೧೧೭೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಮಹಾನಗರ ಪಾಲಿಕೆಗಳ, ಮಹಾನಗರಗಳ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ಮತ್ತು ಸ್ವಚ್ಛತೆಯಲ್ಲಿ ಅವ್ಯವಸ್ಥೆ ಹಾಗೂ ಅಸಮರ್ಪಕ ನಿರ್ವಹಣೆಯಿಂದಾಗಿ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಸ ವಿಲೇವಾರಿ ಮತ್ತು ಸ್ವಚ್ಚತೆಯ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಹೇಗೆ ನಿರ್ವಹಣೆ ಮಾಡುತ್ತಿದೆ ;

(ಇ) ಬೆಳಗಾವಿ ಮಹಾನಗರ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ಸಂಗ್ರಹಣೆಯಲ್ಲಿನ ಅಸಮರ್ಪಕ ನಿರ್ವಹಣೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೆಳಗಾವಿಯಲ್ಲಿ ದಿನನಿತ್ಯ ಎಷ್ಟು ಪ್ರಮಾಣದ ಕಸ ಘನ ತ್ಯಾಜ್ಯ ಸಂಗ್ರಹವಾಗುತ್ತಿದೆ ; ಇದರ ಸಂಸ್ಕರಣೆ ಹಾಗೂ ವಿಲೇವಾರಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ;

(ಉ) ಪ್ರತಿ ವರ್ಷ ಸ್ವಚ್ಛತೆಗೆ, ಕಸ ವಿಲೇವಾರಿಗೆ ಮತ್ತು ಸಂಸ್ಕರಣೆಗೆ ಸರ್ಕಾರವು ಎಷ್ಟು ಅನುದಾನ ನಿಗದಿ ಮಾಡಿದೆ ; ೨೦೧೪–೧೫, ೨೦೧೫–೧೬ರಲ್ಲಿ ಬಿಡುಗಡೆಯಾಗಿ ಬಳಕೆಯಾದ ಹಾಗೂ ಉಳಿಕೆ ಅನುದಾನವೆಷ್ಟು ? (ಮಹಾನಗರವಾರು ವಿವರ ನೀಡುವುದು)

## ಲೋಕಾಯುಕ್ತ ತನಿಖೆ ಪ್ರಕರಣಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೭ (೧೨೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ಲೋಕಾಯುಕ್ತ ತನಿಖೆಗೆ ಒಳಪಡಿಸಿದೆ ;

(ಆ) ಇದರಲ್ಲಿ ತನಿಖೆ ಪೂರ್ಣಗೊಂಡು ಸರ್ಕಾರಕ್ಕೆ ವರದಿ ಒಪ್ಪಿಸಿರುವ ಪ್ರಕರಣಗಳೆಷ್ಟು; ವರದಿ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿದ ಅಧಿಕಾರಿಗಳ ಮೇಲೆ ಲೋಕಾಯುಕ್ತ ದಾಖಲಿಸಿದ ಪ್ರಕರಣಗಳೆಷ್ಟು; ಅವು ಯಾವುವು ; ಈ ಪ್ರಕರಣಗಳಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವರ್ಷಾವಾರು, ಪ್ರಕರಣವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಭ್ರಷ್ಟಾಚಾರ ಮತ್ತು ಅಧಿಕಾರ ದುರುಪಯೋಗದ ಕುರಿತು ಲೋಕಾಯುಕ್ತ ದಾಖಲಿಸಿದ ಪ್ರಕರಣಗಳೆಷ್ಟು ; ಅವು ಯಾವುವು ಮತ್ತು ತೆಗೆದುಕೊಂಡ ಕ್ರಮಗಳೇನು ? (ವರ್ಷಾವಾರು, ಪ್ರಕರಣವಾರು ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ೦೬ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೨೮ (೧೨೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ೩೭೧(ಜೆ) ಅಡಿಯಲ್ಲಿ ಕಳೆದ ೨ ವರ್ಷಗಳಿಂದ ಖಾಲಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಿ ನೇಮಕಾತಿ ಮಾಡಲಾಗಿದೆಯೇ ; ಇದ್ದಲ್ಲಿ, ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ೩೭೧(ಜೆ) ಅಡಿಯಲ್ಲಿರುವ ವೃಂದವಾರು ಹುದ್ದೆಗಳನ್ನು ಗುರುತಿಸಿ ಅಧಿಸೂಚನೆಯನ್ನು ಹೊರಡಿಸುವಲ್ಲಿ ವಿಫಲವಾದ ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ೩೭೧(ಜೆ) ಅಡಿಯಲ್ಲಿ ಮೀಸಲಾತಿಯಲ್ಲಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಆಗುತ್ತಿರುವ ಗೊಂದಲ ಹಾಗೂ ವಿಳಂಬ ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ಮಾಹಿತಿ ನೀಡುವುದು ;

(ಈ) ಸದರಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಗೊಂದಲ ಹಾಗೂ ವಿಳಂಬ ಸರಿಪಡಿಸುವ ನಿಟ್ಟಿನಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು ಹಾಗೂ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಕಾರಾಗೃಹಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೯ (೯೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಕಾರಾಗೃಹಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಒಟ್ಟು ಎಷ್ಟು ಖೈದಿಗಳಿದ್ದಾರೆ ; ಅವರಲ್ಲಿ ಪುರುಷರು, ಮಹಿಳೆಯರು ಮತ್ತು ಬಾಲ ಅಪರಾಧಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪರಪ್ಪನ ಅಗ್ರಹಾರದ ಕಾರಾಗೃಹದಲ್ಲಿ ಇರುವ ಕೈದಿಗಳ ಸಂಖ್ಯೆ ಎಷ್ಟು ; ಅವರಲ್ಲಿ ಪುರುಷರು, ಮಹಿಳೆಯರು ಮತ್ತು ಬಾಲ ಅಪರಾಧಿಗಳ ಸಂಖ್ಯೆ ಎಷ್ಟು ;

(ಇ) ಕೇಂದ್ರ ಕಾರಾಗೃಹದಲ್ಲಿ ಖೈದಿಗಳ ಆರೋಗ್ಯ ತಪಾಸಣೆಗೆ ಆರೋಗ್ಯ ಕೇಂದ್ರ ಇದೆಯೇ ; ಇದರಲ್ಲಿ ಇರುವ ವೈದ್ಯರ ಸಂಖ್ಯೆ ಎಷ್ಟು ; ಅವರು ಯಾವ ಯಾವ ರೋಗಗಳಿಗೆ ಚಿಕಿತ್ಸೆ ನೀಡುವಲ್ಲಿ ಪರಿಣಿತರು ;

(ಈ) ಒಟ್ಟು ಖೈದಿಗಳ ಸಂಖ್ಯೆಯ ಯಾವ ಅನುಪಾತದನ್ವಯ ವೈದ್ಯರನ್ನು ನೇಮಕ ಮಾಡಲಾಗುವುದು ; ಇದೇ ಅನುಪಾತದನ್ವಯ ಪರಪ್ಪನ ಅಗ್ರಹಾರದಲ್ಲಿ ವೈದ್ಯರಿದ್ದಾರೆಯೇ ; ಇಲ್ಲದೆ ಇದ್ದಲ್ಲಿ, ಕಾರಣವೇನು ;

(ಉ) ಬಾಲ ಅಪರಾಧಿಗೆ ಮತ್ತು ಮಾನಸಿಕ ರೋಗಕ್ಕೆ ಒಳಗಾಗುವ ಖೈದಿಗಳ ರೋಗ ತಜ್ಞರು ಇದ್ದಾರೆಯೇ ?

## ಸಮಾನ ಕೆಲಸ : ಸಮಾನ ವೇತನದ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೦ (೧೦೧೧+೯೯೪+೧೦೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಇಲಾಖೆ, ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು/ಸಿಬ್ಬಂದಿಗಳಿಗೆ ಖಾಯಂ ನೌಕರರ ಮಾದರಿಯಲ್ಲೇ ‘‘ಸಮಾನ ಕೆಲಸಕ್ಕೆ ಸಮಾನ ವೇತನ’’ದ ಅಡಿಯಲ್ಲಿ ವೇತನ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ನ್ಯಾಯಾಲಯದ ಆದೇಶವೇನಾದರೂ ಇದೆಯೇ ; ಇದ್ದಲ್ಲಿ, ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು ;

(ಆ) ಈ ಪದ್ಧತಿಯನ್ನು ರಾಜ್ಯ ಸರ್ಕಾರವು ಜಾರಿಗೆ ತಂದಿರುತ್ತದೆಯೇ ; ಇಲ್ಲದಿದ್ದಲ್ಲಿ, ಜಾರಿಗೊಳಿಸಲು ಯಾವ ಕಾಲಮಿತಿಯನ್ನು ನಿಗಧಿಗೊಳಿಸಿಕೊಂಡಿದೆ ; (ವಿವರ ನೀಡುವುದು)

(ಇ) ಈ ಪದ್ಧತಿಯು ರಾಜ್ಯ ಸರ್ಕಾರದ ಯಾವ ಯಾವ ಇಲಾಖೆಗಳಿಗೆ ಅನ್ವಯಿಸುತ್ತದೆ. ಇದರಡಿಯಲ್ಲಿ ಹಾಲಿ ಎಷ್ಟು ಜನರು ಕೆಲಸ ನಿರ್ವಹಿಸುತ್ತಿದ್ದಾರೆ? (ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಇಲಾಖೆಗಳಲ್ಲಿ ಪ್ರವರ್ಗ–೨ಬಿಗೆ ನಿಗದಿಪಡಿಸಿದ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೩೧ (೧೦೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ ಅಲ್ಪಸಂಖ್ಯಾತ ಸಮುದಾಯದ ವರ್ಗದವರಿಗೆ ಪ್ರವರ್ಗ–೨ಬಿ ಅಡಿಯಲ್ಲಿ ಮೀಸಲಾಗಿರುವ ಹುದ್ದೆಗಳ ಪೈಕಿ ೨೦೧೨ ರಿಂದ ಇಲ್ಲಿಯವರೆವಿಗೂ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಈ ಬಗ್ಗೆ, ಸರ್ಕಾರ ಸಮೀಕ್ಷೆ ನಡೆಸಿದೆಯೇ ;

(ಆ) ಪ್ರವರ್ಗ–೨ಬಿ ಅಡಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಿ, ಸಾಮಾಜಿಕ ನ್ಯಾಯ ದೊರಕಿಸಿಕೊಡಲು ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ;

(ಇ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಪ್ರಸಕ್ತ ಖಾಲಿ ಇರುವ ಪ್ರವರ್ಗ–೨ಬಿ ಅಡಿಯಲ್ಲಿನ ಹುದ್ದೆಗಳನ್ನು ಇತರೆ ವರ್ಗಕ್ಕೆ ವರ್ಗಾಯಿಸದೆ ವಿಶೇಷ ನೇಮಕಾತಿ (Special Drive) ಮೂಲಕ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ವಹಿಸುವುದೇ?

## ಭೂಸ್ವಾಧೀನ ಕ್ರಮದಿಂದ ರೆವಿನ್ಯೂ ನಿವೇಶನಗಳನ್ನು ಕಳೆದುಕೊಂಡವರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬದಲಿ ನಿವೇಶನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೩೨ (೧೨೩೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (B.D.A.) ಭೂಸ್ವಾಧೀನ ಕ್ರಮದಿಂದ ರೆವಿನೂ ನಿವೇಶನಗಳನ್ನು ಕಳೆದುಕೊಂಡ ನಿವೇಶನದಾರರಿಗೆ ಬದಲಿ ನಿವೇಶನ ನೀಡುತ್ತಿರುವುದು ನಿಜವೇ ;

(ಆ) ಹಾಗಾದಲ್ಲಿ, ಇಲ್ಲಿಯವರೆಗೂ ಈ ಸಂಬಂಧ ಎಷ್ಟು ಬದಲಿ ನಿವೇಶನ ನೀಡಲಾಗಿದೆ ; ಬಾಕಿ ಇರುವ ಅರ್ಜಿಗಳು ಎಷ್ಟು ; (ಬಡಾವಣೆಗಳವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಎಲ್ಲಾ ದಾಖಲೆಗಳು ಸರಿ ಇದ್ದರೂ ಕೂಡ ನೋಂದಣಿ ಕಾರ್ಡ್ (Registration Card) ಇಲ್ಲ ಎಂದು ಅರ್ಜಿಗಳನ್ನು ವಿಲೆ ಇಡುತ್ತಿರುವುದು ನಿಜವೇ ;

(ಈ) ರೆವಿನ್ಯೂ ನಿವೇಶನಕ್ಕೆ ಬದಲಿ ನಿವೇಶನ ಪಡೆಯುವ ಸಂಬಂಧ ನೋಂದಣಿ ಕಾರ್ಡ್ ಕಡ್ಡಾಯ ಮಾಡಿರುವುದು ಸರಿಯೇ ; ಇದರಿಂದ ರೆವಿನ್ಯೂ ನಿವೇಶನ ಕಳೆದುಕೊಂಡ ಬಡವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು ;

(ಉ) ದಿನಾಂಕ: ೦೧.೦೩.೨೦೧೬ ರಿಂದ ಇಲ್ಲಿಯವರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (B.D.A.) ದವರು ಎಷ್ಟು ನಿವೇಶನದಾರರಿಗೆ ಹೊಸದಾಗಿ ನೋಂದಣಿ ಕಾರ್ಡ್ ಪಡೆಯಲು ಅನುಮತಿ ನೀಡಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಊ) ಬಾಕಿ ಉಳಿದ ಅರ್ಜಿದಾರರಿಗೆ ಯಾವ ಕಾಲಮಿತಿಯೊಳಗೆ ಅನುಮತಿ ನೀಡಲಾಗುವುದು ?

## ಮೈಸೂರು–ಚಾಮರಾಜನಗರ ಜಿಲ್ಲೆಯ ಹಾಡಿಗಳಲ್ಲಿ ಅಕ್ರಮ ಮದ್ಯ ಹಾವಳಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೩ (೧೦೦೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಹಾಡಿಗಳಲ್ಲಿ ಕಾಡಂಚಿನ ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟದ ಜಾಲ ಹಬ್ಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದುವರೆಗೆ ಎಷ್ಟು ದಾಳಿಗಳನ್ನು ನಡೆಸಿ, ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಅಕ್ರಮ ಕಲಬೆರಕೆ ಮದ್ಯ ಕುಡಿದು ಕಳೆದ ಒಂದು ವರ್ಷದಲ್ಲಿ ಹಾಡಿಗಳಲ್ಲಿ ಮೃತಪಟ್ಟಿರುವವರ ಸಂಖ್ಯೆ ಎಷ್ಟು ; ಹುಣಸೂರು ಸಮೀಪದ ಕೊಟ್ಟಿಗೆ ಕಾವಲ್ ಹಾಡಿಯಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಜನ ಮದ್ಯ ಸೇವನೆಯ ಪರಿಣಾಮದಿಂದ ಮೃಪಟ್ಟಿದ್ದಾರೆ ;

(ಇ) ಗಿರಿಜನರು ಸರ್ಕಾರ ನೀಡುವ ದವಸಧಾನ್ಯ, ನಂದಿನಿ ತುಪ್ಪ ಇವುಗಳನ್ನು ನೀಡಿ ಬದಲಿಗೆ ಮದ್ಯವನ್ನು ಪಡೆದು, ಕುಡಿತದ ಚಟಕ್ಕೆ ಬಿದ್ದಿರುವ ನಿದರ್ಶನಗಳು ಕಂಡು ಬಂದಿದೆಯೇ ; ಗಿರಿಜನರನ್ನು ಈ ಮದ್ಯದ ಚಟದಿಂದ ಬಿಡಿಸಿ ಅವರು ಆರೋಗ್ಯಪೂರ್ಣ ಜೀವನ ಸಾಗಿಸುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಮದ್ಯಪಾನ ಸಂಯಮ ಮಂಡಳಿಯ ವತಿಯಿಂದ ಗಿರಿಜನರು ವಾಸಿಸುವ ವಲಯದಲ್ಲಿ ಒಂದು ವಿಸ್ತೃತ ಕಾರ್ಯಕ್ರಮವನ್ನು ರೂಪಿಸಿ ಜಾರಿಗೆ ತರಲು ಕ್ರಮ ತೆಗೆದುಕೊಳ್ಳುವುದೇ ?

## ಪೊಲೀಸ್ ಇಲಾಖೆಯಲ್ಲಿ ಅಧಿಕಾರಿಗಳ ಅಸಹಜ ಸಾವು ಮತ್ತು ಆತ್ಮಹತ್ಯೆ ಮಾಡಿಕೊಂಡ ಪೊಲೀಸರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**ಶ್ರೀ ಕಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೪ (೧೧೭೧+೧೨೧೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಪೊಲೀಸ್ ಸಿಬ್ಬಂದಿಯ ಸಂಖ್ಯೆ ಎಷ್ಟು ; ಆತ್ಮಹತ್ಯೆಗೆ ಕಾರಣಗಳೇನು ; (ಹೆಸರು, ಹುದ್ದೆ ಸಹಿತ ವಿವರಗಳನ್ನು ನೀಡುವುದು)

(ಆ) ಇದರಲ್ಲಿ ಮೇಲಾಧಿಕಾರಿಗಳ ಕಿರುಕುಳದ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣಗಳಲ್ಲಿ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ನಿಷ್ಠಾವಂತ ಅಧಿಕಾರಿಗಳನ್ನು ರಕ್ಷಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; ಪೊಲೀಸ್ ಇಲಾಖೆಯಲ್ಲಿ ಇರುವ ನಡವಳಿಕೆ ಸಂಹಿತೆ ಬಗ್ಗೆ ವಿವರ ನೀಡುವುದು;

(ಈ) ಕೆಳಹಂತದ ಪೊಲೀಸ್ ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸಂಭಾಷಿಸುವ ರೀತಿ, ನಡವಳಿಕೆ ರೀತಿ ಇಲಾಖೆಯಲ್ಲಿ ರೂಢಿಸಿಕಕೊಳ್ಳಲಾಗಿದೆಯೇ ; ಐ.ಪಿ.ಎಸ್. ಅಧಿಕಾರಿಗಳ ಹಂತದಲ್ಲಿ ಇದನ್ನು ರೂಢಿಸಿಕೊಳ್ಳಲು ಸರ್ಕಾರದ ಕ್ರಮ ಏನು ;

(ಉ) ಉನ್ನತ ಹುದ್ದೆಗಳಿಗೆ ಆಯ್ಕೆ ಮಾಡುವಾಗ ಮಾನಸಿಕ ಸಾಮರ್ಥ್ಯತೆ ಅಳೆಯಲು ಇರುವ ಮಾನದಂಡವೇನು ;

(ಊ) ಪೊಲೀಸ್ ಇಲಾಖೆಯು ಸದಾ ಒತ್ತಡದಲ್ಲಿರುವುದರಿಂದ, ಎದುರಾದ ಪರಿಸ್ಥಿತಿಗಳನ್ನು ಎದುರಿಸಲು, ಮಾನಸಿಕ ಸ್ಥೈರ್ಯ ದೃಢಪಡಿಸಲು ಸರ್ಕಾರವು ಅಧಿಕಾರಿಗಳಿಗೆ ಯಾವ ರೀತಿಯ ತರಬೇತಿ ನೀಡಲಾಗುತ್ತದೆ ; ಹಾಗೂ ಅವರಿಗೆ ನುರಿತ ತಜ್ಞ ಮಾನಸಿಕ ವೈದ್ಯರಿಂದ ಆಗಾಗ್ಗೆ ತರಬೇತಿ, ಚಿಂತನ–ಮಂಥನದಂತಹ ಮತ್ತು ಕೌನ್ಸಿಲಿಂಗ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಅವರ ರೂಪುರೇಷೆಗಳೇನು?

## ಕೇಂದ್ರ ಸರ್ಕಾರದ ನಗರೋತ್ಥಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಹಣದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೫ (೧೧೮೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಹಾನಗರ ಪಾಲಿಕೆಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದಿಂದ ನಗರೋತ್ಥಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಹಣ ಸಮರ್ಪಕವಾಗಿ ಸೂಕ್ತ ಸಮಯದಲ್ಲಿ ಅನುಷ್ಠಾನಗೊಳಿಸಲಾಗದೆ ಹಿಂದಿನ ವರ್ಷದ ಹಣ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕ್ಕಮಗಳೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಿಗೆ ಈ ಯೋಜನೆಯಡಿಯಲ್ಲಿ ಬಿಡುಗಡೆಗೊಳಿಸಲಾಗಿರುವ ಹಣವೆಷ್ಟು ; ಇದುರೆಗೂ ಖರ್ಚಾಗಿರುವ ಹಣವೆಷ್ಟು ;

(ಇ) ಯೋಜನೆ ಅನುಷ್ಠಾನದಲ್ಲಿ ಹೊರ ಜಿಲ್ಲೆಯ ಗುತ್ತಿಗೆದಾರರಿಂದ ವಿಳಂಬವಾಗಿರುವುದು ಕಾರಣವಲ್ಲವೇ ;

(ಈ) ನಗರೋತ್ಥಾನ ಯೋಜನೆಯನ್ನು ಸಂಬಂಧಪಟ್ಟ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಗುತ್ತಿಗೆದಾರರಿಂದ ಅನುಷ್ಠಾನ ಮಾಡಲು ಇರುವ ತೊಂದರೆ ಏನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500